# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 913
2. ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸುವ ದಿನಾಂಕ : 24-02-2022
4. ಉತ್ತರಿಸುವ ಸಚಿವರು : ಮಾನ್ಯ ಕಾರ್ಮಿಕ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೆಲವು ವರ್ಷಗಳಿಂದ ಎನ್.ಸಿ.ಎಲ್.ಪಿ ಯೋಜನೆ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮತ್ತೆ ಸದರಿ ಯೋಜನೆಯನ್ನು ಜಾರಿಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಂದಿನಿಂದ ಮತ್ತು ಯೋಜನೆಯಲ್ಲಿ ಏನಾದರೂ ಬದಲಾವಣೆಗಳಿವೆಯೇ; | ಹೌದು.<br>• ಎನ್.ಸಿ.ಎಲ್.ಪಿ ಯೋಜನೆಯು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ಈ ಯೋಜನೆಯನ್ನು 1988ರಲ್ಲಿ ಕರ್ನಾಟಕ ರಾಜ್ಯದಲ್ಲಿ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಬಾಗಲಕೋಟೆ, ಬಳ್ಳಾರಿ, ವಿಜಯಪುರ, ಬೆಳಗಾವಿ, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಕಲಬುರಗಿ, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ಹಾವೇರಿ ಹಾಗೂ ತುಮಕೂರು ಹೀಗೆ ಒಟ್ಟು ಹದಿನೇಳು ಜಿಲ್ಲೆಗಳಲ್ಲಿ ಜಾರಿಗೊಳಿಸಿತ್ತು. ಪ್ರಸ್ತುತ ಬೆಂಗಳೂರು ಗ್ರಾಮಾಂತರ, ರಾಯಚೂರು ಹಾಗೂ ಬಳ್ಳಾರಿ ಈ ಮೂರು ಜಿಲ್ಲೆಗಳಲ್ಲಿ ಮಾತ್ರ ಎನ್.ಸಿ.ಎಲ್.ಪಿ ಯೋಜನೆಯು ಜಾರಿಯಲ್ಲಿದ್ದು ಉಳಿದ 28 ಜಿಲ್ಲೆಗಳಲ್ಲಿ ಎಸ್.ಸಿ.ಎಲ್.ಪಿ ಯೋಜನೆ ಜಾರಿಯಲ್ಲಿರುತ್ತದೆ.<br>• ಎನ್.ಸಿ.ಎಲ್.ಪಿ ಯೋಜನೆಯು ಕೇಂದ್ರ ಸರ್ಕಾರದ ಯೋಜನೆಯಾಗಿರುತ್ತದೆ ರಾಜ್ಯದಲ್ಲಿ ಪ್ರಸ್ತುತ 3 ಜಿಲ್ಲೆಗಳಾದ ಬೆಂಗಳೂರು ಗ್ರಾಮಾಂತರ, ರಾಯಾಚೂರು ಹಾಗೂ ಬಳ್ಳಾರಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ ಜಿಲ್ಲೆಗಳಲ್ಲಿ ರಾಜ್ಯ ಬಾಲಕಾರ್ಮಿಕ ಯೋಜನೆ (ಎಸ್.ಸಿ.ಎಲ್.ಪಿ) ಜಾರಿಯಲ್ಲಿರುವುದರಿಂದ ಮತ್ತೆ ಎನ್.ಸಿ.ಎಲ್.ಪಿ ಯೋಜನೆ ಜಾರಿಗೊಳಿಸುವ ಕುರಿತಾದ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| (ಆ) | ಯೋಜನೆ ಸ್ಥಗಿತಗೊಂಡಿದ್ದಾಗ ಈಗಾಗಲೇ ಈ ಕಾರ್ಯಕ್ರಮವನ್ನು ಮುನ್ನಡೆಸುತ್ತಿದ್ದ ಸಂಸ್ಥೆಗಳು ಮತ್ತು ಮಕ್ಕಳ ಸ್ಥಿತಿ ಬಗ್ಗೆ ತಿಳಿಯಲಾಗಿತ್ತೇ; ಅವರಿಗೆ ಇತರೆ ಪರ್ಯಾಯ ವ್ಯವಸ್ಥೆಗಳನ್ನು ಮಾಡಲಾಗಿತ್ತೇ; | ರಾಷ್ಟ್ರೀಯ ಬಾಲಕಾರ್ಮಿಕ ಯೋಜನೆ (ಎನ್.ಸಿ.ಎಲ್.ಪಿ)ಯು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ರಾಷ್ಟ್ರೀಯ ಬಾಲಕಾರ್ಮಿಕ ಯೋಜನೆ (ಎನ್.ಸಿ.ಎಲ್.ಪಿ) 2016ರ ಪರಿಷ್ಕೃತ ಮಾರ್ಗಸೂಚಿಯ ಪ್ರಕಾರ ತರಬೇತಿ ಕೇಂದ್ರಗಳು ನಡೆಯುವವರೆಗೆ ಮಾತ್ರ ಯೋಜನೆಯನ್ನು ಮುಂದುವರೆಸಲಾಗುತ್ತದೆ. ಕೋವಿಡ್-19 ಸಾಂಕ್ರಾಮಿಕ ಖಾಯಿಲೆ/ರೋಗದ ಹಿನ್ನೆಲೆಯಲ್ಲಿ ಬಾಲಕಾರ್ಮಿಕ ವಿಶೇಷ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲ.<br>ಈಗಾಗಲೇ ತರಬೇತಿ ಕೇಂದ್ರಗಳಲ್ಲಿ ಓದುತ್ತಿದ್ದ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿ(Child Welfare Committee)ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ ಹಾಗೂ ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲಾಗಿರುತ್ತದೆ. |

| | | |
|---|---|---|
| (ಇ) | ಮಕ್ಕಳು ಮತ್ತು ಹದಿಹರೆಯದವರ ಕಾರ್ಮಿಕ ಪದ್ಧತಿ ನಿಷೇಧ ಮತ್ತು ನಿಯಂತ್ರಣ ಕಾಯಿದೆ, ರಾಷ್ಟ್ರೀಯ ಶಿಕ್ಷಣ ನೀತಿಯ, ಮಕ್ಕಳ ಹಕ್ಕುಗಳ ಒಡಂಬಡಿಕೆ ಇತ್ಯಾದಿಗಳ ಹಿನ್ನೆಲೆಯಲ್ಲಿ ಬಾಲಕಾರ್ಮಿಕ ಮಕ್ಕಳ ಪರಿಸ್ಥಿತಿಯನ್ನು ಸುಧಾರಿಸಿ ಬಾಲಕಾರ್ಮಿಕ ಪದ್ಧತಿ ಸಂಪೂರ್ಣ ತೊಡೆದು ಹಾಕುವಲ್ಲಿ ಎನ್.ಸಿ.ಎಲ್.ಪಿ. ಪಾತ್ರವೇನು: (ವಿವರ ನೀಡುವುದು) | ಮಕ್ಕಳು ಮತ್ತು ಹದಿಹರೆಯದವರ ಕಾರ್ಮಿಕ ಪದ್ಧತಿ ನಿಷೇಧ ಮತ್ತು ನಿಯಂತ್ರಣ ಕಾಯ್ದೆ, ರಾಷ್ಟ್ರೀಯ ಶಿಕ್ಷಣ ನೀತಿಯ ಮಕ್ಕಳ ಹಕ್ಕುಗಳ ಒಡಂಬಡಿಕೆ ಇತ್ಯಾದಿಗಳ ಹಿನ್ನೆಲೆಯಲ್ಲಿ ಬಾಲಕಾರ್ಮಿಕ ಮಕ್ಕಳ ಪರಿಸ್ಥಿತಿಯನ್ನು ಸುಧಾರಿಸಿ ಬಾಲಕಾರ್ಮಿಕ ಪದ್ಧತಿ ಸಂಪೂರ್ಣ ತೊಡೆದು ಹಾಕುವಲ್ಲಿ ಎನ್.ಸಿ.ಎಲ್.ಪಿ. ಈ ಕೆಳಕಂಡ ಪಾತ್ರವನ್ನು ವಹಿಸುತ್ತದೆ;<br>1. ಎನ್.ಸಿ.ಎಲ್.ಪಿ. ಯೋಜನೆಯು ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) ಕಾಯ್ದೆ, 1986 ಅನ್ನು ಮತ್ತು ಈ ಕಾಯ್ದೆಯ ನಿಯಮಾವಳಿಗಳನ್ನು ರಾಜ್ಯಾದಾದ್ಯಂತ ಸಂಪೂರ್ಣವಾಗಿ ಹಾಗೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು.<br>2. 6 ರಿಂದ 14 ವರ್ಷದೊಳಗಿನ ಮಕ್ಕಳು ಯಾವುದೇ ಉದ್ಯೋಗ / ಕೆಲಸದಲ್ಲಿ ತೊಡಗಿರುವುದನ್ನು ಹಾಗೂ 18 ವರ್ಷ ವಯಸ್ಸಿನವರೆಗಿನ ಕಿಶೋರರು ಅಪಾಯಕಾರಿ ಉದ್ದಿಮೆಗಳಲ್ಲಿ ದುಡಿಯುವ ಕುರಿತು ಸಮೀಕ್ಷೆ ನಡೆಸುವುದು. ಸಮೀಕ್ಷೆಯಲ್ಲಿ ಪತ್ತೆಯಾಗುವ ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಮಕ್ಕಳ ಸಂಖ್ಯೆಗನುಗುಣವಾಗಿ ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ ವಿಶೇಷ ತರಬೇತಿ ಕೇಂದ್ರಗಳ(STCs)ನ್ನು ಪ್ರಾರಂಭಿಸುವುದು ಮತ್ತು ಸದರಿ ತರಬೇತಿ ಕೇಂದ್ರಗಳಲ್ಲಿ ಸೇತು–ಶಿಕ್ಷಣ(Bridge Education) ಮತ್ತು ಪೂರ್ವ ವೃತ್ತಿಪರ / ವೃತ್ತಿಪರ ತರಬೇತಿ ನೀಡಿ ಔಪಚಾರಿಕ ಶಿಕ್ಷಣ ವ್ಯವಸ್ಥೆಯಲ್ಲಿ ವಿಲೀನಗೊಳಿಸುವುದು.<br>3. ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಪದ್ಧತಿಯ ನಿರ್ಮೂಲನೆ ಕುರಿತು ವ್ಯಾಪಕವಾದ ಜಾಗೃತಿ ಮೂಡಿಸಲು ಮಾಹಿತಿ ಶಿಕ್ಷಣ ಸಂವಹನ(IEC) ಚಟುವಟಿಕೆಗಳನ್ನು ಆಯೋಜಿಸುವುದು.<br>4. ಜಿಲ್ಲೆಯಾದ್ಯಂತ ನಿರಂತರವಾಗಿ ಬಾಲಕಾರ್ಮಿಕರ ಅನಿರೀಕ್ಷಿತ ತಪಾಸಣೆಗಳು / ದಾಳಿಗಳನ್ನು ನಡೆಸಿ, ತಪಾಸಣೆಗಳಲ್ಲಿ / ದಾಳಿಗಳಲ್ಲಿ ಪತ್ತೆಯಾದ ಬಾಲಕಾರ್ಮಿಕರನ್ನು **ಮಕ್ಕಳ ಕಲ್ಯಾಣ ಸಮಿತಿ (Child Welfare Committee)** ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲಾಗುತ್ತದೆ. ಬದಲಿಗೆ ಸಮಾಜಿಕ ಅನಿಷ್ಠ ಪದ್ಧತಿಯಾದ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವುದು. |
| (ಈ) | ಪ್ರಸ್ತುತ ಭವಿಷ್ಯದಲ್ಲಿ ರಾಷ್ಟ್ರೀಯ ಬಾಲಕಾರ್ಮಿಕ ಯೋಜನೆಗಳೇನು? | ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ಎನ್.ಸಿ.ಎಲ್.ಪಿ ಯೋಜನೆಯನ್ನು ಜಾರಿಗೊಳಿಸುತ್ತಿದ್ದು, ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತು "ರಾಷ್ಟ್ರೀಯ ಬಾಲಕಾರ್ಮಿಕ ಯೋಜನೆ–2016"ರ ಪರಿಷ್ಕೃತ ಮಾರ್ಗಸೂಚಿಗಳನ್ನು ರಚಿಸಿರುತ್ತದೆ. ಈ ಮಾರ್ಗಸೂಚಿಗಳನ್ವಯ ಎನ್.ಸಿ.ಎಲ್.ಪಿ ಯೋಜನೆಯು ಪ್ರಸ್ತುತ ಈಗಾಗಲೇ ಜಾರಿಯಲ್ಲಿರುವ ಜಿಲ್ಲೆಗಳಲ್ಲಿ ಹಾಗೂ ಕೇಂದ್ರ ಸರ್ಕಾರವು ಮುಂದೆ |

| | | |
|---|---|---|
| | | ಜಾರಿಮಾಡುವ ಜಿಲ್ಲೆಗಳಲ್ಲಿ ರಾಷ್ಟ್ರೀಯ ಬಾಲಕಾರ್ಮಿಕ ಯೋಜನೆ ಅನುಷ್ಠಾನಗೊಳ್ಳುತ್ತದೆ. ಈ ಯೋಜನೆ ಮೂಲಕ ಕೆಲಸದಲ್ಲಿ ತೊಡಗಿರುವ ಬಾಲಕಾರ್ಮಿಕ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ಪುನರ್ವಸತಿಗೊಳಿಸಲಾಗಿರುತ್ತದೆ. |

**ಸಂಖ್ಯೆ: ಕಾಇ 8 ಸಿಎಲ್‌ಸಿ 2022**

(ಅರಬೈಲ್ ಶಿವರಾಮ್ ಹೆಬ್ಬಾರ್)
ಕಾರ್ಮಿಕ ಸಚಿವರು.